ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಗೃಹ - ಡ್ರಗ್ಸ್ ಮಾಫಿಯಾ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 12/9/2020


# ಡ್ರಗ್ಸ್ ಜಾಲಕ್ಕೆ ಹವಾಲಾ ಹಣ

12/9/20

## ಎಲ್ಲ ಆಯಾಮಗಳಲ್ಲಿಯೂ ತನಿಖೆ: ಸಚಿವ ಬಸವರಾಜ ಬೊಮ್ಮಾಯಿ

ಬೆಂಗಳೂರು: ಡ್ರಗ್ಸ್ ಮಾರಾಟ ಜಾಲದ ಹಿಂದೆ ಹವಾಲಾ ಹಣ ಬಳಕೆಯಾಗುತ್ತಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡ್ರಗ್ಸ್ ವ್ಯವಹಾರದಲ್ಲಿ ಸಾಕಷ್ಟು ಹಣಕಾಸಿನ ಆಯಾಮ ಕೂಡ ಇದೆ. ಇದರಲ್ಲಿ ವಿವಿಧ ರೀತಿಯ ಹಣಕಾಸಿನ ವಹಿವಾಟು ನಡೆದಿರುತ್ತದೆ. ದೇಶದ ಬೇರೆ ಬೇರೆ ಭಾಗದಲ್ಲಿ ವ್ಯವಹಾರಗಳು ನಡೆದಿರುತ್ತವೆ. ಈ ಬಗ್ಗೆ ಎಲ್ಲ ಆಯಾಮಗಳಲ್ಲಿಯೂ ತನಿಖೆ ನಡೆಯುತ್ತದೆ ಎಂದು ಹೇಳಿದರು.



ಮಾಜಿ ಸಚಿವ ಜಮೀರ್ ಅಹಮದ್ ಅವರನ್ನು ಬಂಧಿಸದಿರುವ ಬಗ್ಗೆ ಸಂಸದ ಪ್ರತಾಪ್ ಸಿಂಹ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಯಾವುದೇ ಮೂಲಗಳಿಂದ ಯಾರದೇ ಹೆಸರು ಕೇಳಿ ಬಂದರೂ ತನಿಖೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಮಾಧ್ಯಮಗಳಲ್ಲಿಯೂ ಬರುವ ಮಾಹಿತಿಗಳನ್ನು ಆಧರಿಸಿ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಬೆಂಗಳೂರಿನಲ್ಲಿ ಸಿಸಿಬಿ ಕಾರ್ಯಾಚರಣೆ ಮುಂದುವರಿಯುತ್ತದೆ. ಬಂಧನಕ್ಕೊಳಗಾದವರನ್ನು ಕೋರ್ಟ್‌ಗೆ ಹಾಜರು ಪಡಿಸುವ ಪ್ರಕ್ರಿಯೆ ಮುಂದುವರಿಯುತ್ತದೆ ಎಂದು ಹೇಳಿದರು.

ಇದೇ ವೇಳೆ, ಪೊಲೀಸರು ಭಾರೀ ಪ್ರಮಾಣದ ಗಾಂಜಾ ವಶಪಡಿಸಿಕೊಂಡಿದ್ದು, ಈ ಕಾರ್ಯಾಚರಣೆ ನಿರಂತರ ಮುಂದುವರಿಯಲಿದೆ ಎಂದು ಹೇಳಿದರು.

### ಡ್ರಗ್ ಕೇಸ್‌ನಲ್ಲಿ ಯಾರಿದ್ದರೂ ಬಯಲಾಗುತ್ತೆ: ಬಿ.ಸಿ.ಪಾಟೀಲ್

ಕೊಪ್ಪಳ: ಡ್ರಗ್ ಕೇಸ್‌ನಲ್ಲಿ ಭೂಗತ ಲೋಕ, ಟೆರರಿಸ್ಟ್, ಐಎಸ್‌ಐ ಸೇರಿ ಯಾರದ್ದೇ ಕೈವಾಡವಿದ್ದರೂ ತನಿಖೆ ವೇಳೆ ಗೊತ್ತಾಗಲಿದೆ. ಈ ಬಗ್ಗೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಕೃಷಿ ಸಚಿವ ಬಿ.ಸಿ. ಪಾಟೀಲ್ ಹೇಳಿದರು.

ಯಲಬುರ್ಗಾ ಪ್ರವಾಸಿ ಮಂದಿರಲ್ಲಿ ಸುದ್ದಿಗಾರರ ಜತೆ ಮಾತನಾಡಿದ ಅವರು, ಡ್ರಗ್ ಮಾಫಿಯಾ ನಿರ್ಮೂಲನೆಗೆ ಬಿಜೆಪಿ ಸರ್ಕಾರ ಕ್ರಮ ಕೈಗೊಳ್ಳಲಿದೆ. ನಾನೂ ಸಿನಿಮಾ ನಟನಾಗಿ ಕೆಲಸ ಮಾಡಿದ್ದೇನೆ. ನಮ್ಮ ಅವಧಿಯಲ್ಲಿ ಇಂತಹ ಯಾವುದೇ ಡ್ರಗ್ ಮಾಫಿಯಾ ಇರಲಿಲ್ಲ. ಈಗ ಅದು ಬೆಳಕಿಗೆ ಬರುತ್ತಿದೆ. ಯುವ ಜನಾಂಗ ಇದಕ್ಕೆ ಬಲಿಯಾಗುತ್ತಿದೆ. ಚಿತ್ರರಂಗದಲ್ಲಿ ಇದ್ದವರು ಗಾಜಿನ ಮನೆಯಲ್ಲಿ ಇದ್ದಂತೆ. ನಮ್ಮನ್ನು ಲಕ್ಷಾಂತರ ಜನ ನೋಡುತ್ತಿರುತ್ತಾರೆ. ನಮ್ಮಂತೆ ಅವರು ಅನುಕರಣೆ ಮಾಡುತ್ತಾರೆ. ಅವರು ಒಳ್ಳೆದನ್ನು ಅನುಕರಣೆ ಮಾಡಿದರೆ ತೊಂದರೆಯಿಲ್ಲ, ಆದರೆ ಇಂತಹದ್ದನ್ನು ಅನುಕರಣೆ ಮಾಡಿದರೆ ದೊಡ್ಡ ದುರಂತ ಆಗುತ್ತದೆ. ಸಿನಿಮಾದಲ್ಲಿ ಇರುವವರು ಇನ್ನೊಬ್ಬರಿಗೆ ಮಾದರಿಯಾಗಿರಬೇಕು. ಡ್ರಗ್ ವಿಚಾರದಲ್ಲಿ ಜಮೀರ್ ಅಹ್ಮದ್ ಸೇರಿ ಯಾರದ್ದೇ ಹೆಸರು ಕೇಳಿ ಬಂದರೂ ಯಾರನ್ನೂ ಬಿಡಲ್ಲ, ಡ್ರಗ್ ಸೇವನೆ ಮಾಡುವವರು ರಾಜಕೀಯದವರು, ಸಿನಿಮಾದವರು ಅಂತಾ ಇಲ್ಲ, ಎಲ್ಲದರಲ್ಲೂ ಇರ್ತಾರೆ. ಯಾರೇ ಮಾಡಿದರೂ ತಪ್ಪು ತಪ್ಪೆ ಎಂದರು.



ಡ್ರಗ್ ಮಾಫಿಯಾ 2 ರೀತಿಯಲ್ಲಿ ನಡೆಯುತ್ತಿದೆ. ದುಡ್ಡಿಗಾಗಿ ಯುವ ಸಮೂಹವನ್ನು ಬಳಸಿಕೊಂಡು ಮಾಡುತ್ತಿರುವುದು. ಮತ್ತೊಂದು ಜಿಹಾದಿ ಮಾಫಿಯಾ. ಯುವ ಸಮುದಾಯವನ್ನು ಹಾಳು ಮಾಡಬೇಕೆಂಬುದೇ ಜಿಹಾದಿ ಡ್ರಗ್ ಮಾಫಿಯಾದ ಉದ್ದೇಶ. ಇವೆರಡೂ ಮಾಫಿಯಾ ದೇಶಕ್ಕೆ ಮಾರಕ.

• ಶೋಭಾ ಕರಂದ್ಲಾಜೆ ಸಂಸದೆ

ಉಪ್ಪು ತಿಂದವರು ನೀರು ಕುಡಿಯಲೇಬೇಕು. ಡ್ರಗ್ಸ್ ಮಾಫಿಯಾದಲ್ಲಿ ಯಾರೇ ತೊಡಗಿರಲಿ ಅವರನ್ನು ಬಿಡುವ ಮಾತೇ ಇಲ್ಲ ಎಂದು ಗೃಹ ಸಚಿವರು ಈಗಾಗಲೇ ತಿಳಿಸಿದ್ದಾರೆ. ಬೆಂಗಳೂರಿನ ಶಾಸಕರ ಮಕ್ಕಳು ಇದರಲ್ಲಿ ಭಾಗಿಯಾಗಿದ್ದಾರೆ ಎಂದು ನಟಿ ಸಂಜನಾ ಆರೋಪಿಸಿದ್ದರೆ ದಾಖಲೆ ಕೊಡಲಿ. ತಪ್ಪು ಯಾರೇ ಮಾಡಿದ್ದರೂ ಶಿಕ್ಷೆ ಅನುಭವಿಸುತ್ತಾರೆ.

• ಬೈರತಿ ಬಸವರಾಜ, ನಗರಾಭಿವೃದ್ಧಿ ಸಚಿವ

ಡ್ರಗ್ಸ್ ಮಾಫಿಯಾದಲ್ಲಿ ಸರ್ಕಾರ ಯಾರನ್ನೂ ರಕ್ಷಿಸುವ ಕೆಲಸ ಮಾಡುವುದಿಲ್ಲ. ಮಾಫಿಯಾದಲ್ಲಿ ಸಿಲುಕಿರುವ ನಟಿಯರ ವಿರುದ್ಧ ಕಾನೂನು ಕ್ರಮ ಜರುಗಲಿದೆ.

• ಎಸ್.ಟಿ ಸೋಮಶೇಖರ್ ಸಚಿವ